### 4. ಕಲ್ಯಾಣ ಕರ್ನಾಟಕದಲ್ಲಿ ಭಾರೀ ಮಳೆ

ಕಳೆದ ಕೆಲದಿನಗಳಿಂದ ದುರ್ಬಲವಾಗಿದ್ದ ಮುಂಗಾರು ಉತ್ತರ ಕರ್ನಾಟಕದ ಕೆಲ ಭಾಗಗಳಲ್ಲಿ ಪ್ರಬಲವಾಗಿದ್ದು, ಕಲ್ಯಾಣ ಕರ್ನಾಟಕ ಕಲಬುರಗಿ, ಯಾದಗಿರಿ, ಬೀದರ್ ಜಿಲ್ಲೆಗಳಲ್ಲಿ ಮೂರು ಜಿಲ್ಲೆಗಳಲ್ಲಿ ಧಾರಾಕಾರವಾಗಿ ಸುರಿದಿದೆ. ಅದರಲ್ಲೂ ಯಾದಗಿರಿ ಜಿಲ್ಲೆಯಲ್ಲಿ ಭಾರೀ ವರ್ಷಧಾರೆಯಾಗಿದ್ದು ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ. ಏತನ್ಮಧ್ಯೆ ಕೊಡಗಿನಲ್ಲೂ ಉತ್ತಮ ಮಳೆಯಾಗಿದ್ದು, ದಕ್ಷಿಣ ಕನ್ನಡ, ಉತ್ತರ ಕನ್ನಡ ಜಿಲ್ಲೆಗಳ ಕೆಲವೆಡೆ ಸಾಧಾರಣ ಮಳೆ ಸುರಿದಿದೆ.

ಯಾದಗಿರಿ ನಗರ ಸೇರಿದಂತೆ ಜಿಲ್ಲೆಯ ಹಲವೆಡೆ ಬೆಳಗ್ಗೆಯಿಂದ ಸಂಜೆವರೆಗೆ ಭಾರೀ ಮಳೆ ಸುರಿದಿದ್ದು, ಹಳ್ಳ ದಾಟುವಾಗ ನೀರಿನ ರಭಸಕ್ಕೆ ಕೊಚ್ಚಿಕೊಂಡು ಹೋಗುತ್ತಿದ್ದ ಮಹಿಳೆಯೊಬ್ಬರನ್ನು ರಕ್ಷಿಸಿರುವ ಘಟನೆ ತಾಲ್ಲೂಕಿನ ಪಲಗಾಪೂರ ಗ್ರಾಮದ ಬಳಿ ನಡೆದಿದೆ. ಯಾದಗಿರಿ ನಗರ ಪ್ರದೇಶಗಳಲ್ಲಿ ತಗ್ಗು ಪ್ರದೇಶದ ಮನೆಗಳಲ್ಲಿ ನೀರು ನುಗ್ಗಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಗ್ರಾಮೀಣ ಪ್ರದೇಶಗಳಲ್ಲಿ ಬಹುತೇಕ ಹೊಲಗದ್ದೆಗಳಲ್ಲಿ ನೀರು ತುಂಬಿ, ಹತ್ತಿ, ಭತ್ತ, ಹೆಸರು ಬೆಳೆಗಳು ನೀರುಪಾಲಾಗಿವೆ.

ಕಲಬುರಗಿ ಜಿಲ್ಲೆಯ ಜೇವರ್ಗಿ, ಅಫಜಲ್ಪುರುಕ, ಕಲಬುರಗಿ, ಸೇಡಂ ಚಿತ್ತಾಪುರ, ಕಾಳಗಿ, ಶಹಾಬಾದ್, ಯಡ್ರಾಮಿ ತಾಲ್ಲೂಕುಗಳ ವ್ಯಾಪ್ತಿಯಲ್ಲಿಯೂ ಮಳೆ ಸುರಿದಿದ್ದು ನೀಲಕೋಡ್ ಗ್ರಾಮದಲ್ಲಿ 131 ಮಿ.ಮೀ ಮಳೆಯಾಗಿದೆ. ಹುಮನಾಬಾದ್, ಬಸವಕಲ್ಯಾಣ ಸೇರಿದಂತೆ ಬೀದರ್ ಜಿಲ್ಲೆ ವಿವಿಧೆಡೆ ಉತ್ತಮ ಮಳೆಯಾಗಿದ್ದು ಹಳ್ಳ ಕೊಳ್ಳಗಳು ತುಂಬಿ ಹರಿಯುತ್ತಿವೆ. ಬಳ್ಳಾರಿ ಜಿಲ್ಲೆಯ ಹಲವೆಡೆ ಜಿಟಿಜಿಟಿ ಮಳೆಯಾಗಿದೆ. ಗದಗ ಜಿಲ್ಲೆಯ ನರಗುಂದ, ಡಂಬಳ ಹೋಬಳಿ ವ್ಯಾಪ್ತಿಯಲ್ಲಿ ಉತ್ತಮ ಮಳೆಯಾಗಿದ್ದರೆ, ಧಾರವಾಡ ಜಿಲ್ಲೆಯಲ್ಲಿ ಸಾಧಾರಣ ಮಳೆ ಸುರಿದಿದೆ.

**ಹಲವೆಡೆ ಯೆಲ್ಲೋ ಅಲರ್ಟ್:**-ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡದಲ್ಲಿ ಜುಲೈ 20ರ ವರೆಗೂ ಭಾರೀ ಮಳೆಯಾಗಲಿದ್ದು, ಐದು ದಿನ 'ಯೆಲ್ಲೋ ಅಲರ್ಟ್' ಘೋಷಣೆ ಮಾಡಲಾಗಿದೆ. ಉತ್ತರ ಒಳನಾಡಿನ ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಕಲಬುರ್ಗಿ, ರಾಯಚೂರು, ವಿಜಯಪುರ ಮತ್ತು ಯಾದಗಿರಿಯಲ್ಲಿ ಜುಲೈ 16 ರಂದು ಭಾರೀ ಮಳೆಯಾಗಲಿದ್ದು, 'ಯೆಲ್ಲೋ ಅಲರ್ಟ್' ಘೋಷಿಸಲಾಗಿದೆ.

ಆಧಾರ:ಕನ್ನಡ ಪ್ರಭ, ದಿನಾಂಕ:16.07.2020